# SSLC Kannada Question Bank 1

**೧. ರಾಮನ ಸ್ವಾಗತಕ್ಕಾಗಿ ಶಬರಿ ಮಾಡಿಕೊಂಡಿದ್ದ ಸಿದ್ಧತೆಗಳೇನು?**

ಶಬರಿಯು ಶ್ರೀರಾಮನ ಸ್ವಾಗತಕ್ಕಾಗಿ ತಳಿರು, ಪರಿಮಳದ ಹೂವು, ಮಧುಪರ್ಕ ಮತ್ತು ರುಚಿಕರ ಹಣ್ಣುಹಂಪಲುಗಳನ್ನು ಸಂಗ್ರಹಿಸಿದ್ದಳು. ಬಾಡಿ ಹೋಗಿರುವ ಹೂ ಹಣ್ಣು ತಳಿರುಗಳನ್ನು ತೆಗೆದು ಹೊಸದನ್ನು ಇಡುತ್ತಿದ್ದಳು. ರಾಮನಿಗಾಗಿ ಬಗೆಬಗೆಯ ಕಂಪನ್ನಿಡುವ ವನಮಾಲೆಯ ಮಾಡಿದ್ದಳು.

**೨. ಲಂಡನ್ನಿನ ಹೆಣ್ಣು ಮಕ್ಕಳು ಯಾವ ಯಾವ ಕೆಲಸದಲ್ಲಿ ನಿಯುಕ್ತರಾಗಿರುತ್ತಾರೆ?**

ಲಂಡನ್ನಿನ ಎಲ್ಲ ಅಂಗಡಿಗಳಲ್ಲಿ ಸಾಮಾನ್ಯವಾಗಿ ಸ್ತ್ರೀಯರೇ ಕೆಲಸ ಮಾಡುತ್ತಾರೆ. ಉಪಹಾರ ಗೃಹಗಳಲ್ಲಿ ಹೆಣ್ಣುಮಕ್ಕಳು, ಯಾವುದಾದರೊಂದು ದೊಡ್ಡ ಅಂಗಡಿಗೆ ಹೋದರೆ ಅಲ್ಲಿಯ ಟೈಪಿಸ್ಟ್ ಕಾರಕೂನ ಒಬ್ಬ ಹೆಣ್ಣು ಮಗಳು. ಸಿನಿಮಾ ಗೃಹದಲ್ಲಿ ಜಾಗವನ್ನು ಹುಡುಕಿ ಕೊಡುವವರು ಹೆಣ್ಣು. ಕಾಲೇಜಿನಲ್ಲಿ ಸಹ ವಿದ್ಯಾರ್ಥಿನಿಯರ ಅನುಕೂಲಕ್ಕಾಗಿ ಸಿಪಾಯಿಣಿಯರನ್ನು ಇಟ್ಟಿದ್ದಾರೆ.

**೩. ಗುರೂಪದೇಶವು ಯಾರಿಗೆ ಮೆಚ್ಚಿಕೆಯಾಗುವುದಿಲ್ಲ?**

ಗುರೂಪದೇಶವು ಮೂರ್ಖರಿಗೆ ಮತ್ತು ರಾಜರ ಮನೆತನದಲ್ಲಿ ಹುಟ್ಟಿದವರಿಗೆ ಮೆಚ್ಚಿಕೆಯಾಗುವುದಿಲ್ಲ. ರಾಜರ ಮನೆತನದಲ್ಲಿ ಹುಟ್ಟಿದರೆ ಸಾಕು. ಅಹಂಕಾರದಿಂದ ಅವರ ಕಿವಿ ಕಿವುಡಾಗಿಬಿಡುತ್ತದೆ. ಎಂಥ ಉಪದೇಶವೂ ಅವರ ಕಿವಿಗೆ ನಾಟುವುದಿಲ್ಲ. ಯಾರದೋ ದಾಕ್ಷಿಣ್ಯಕ್ಕೆ ಉಪದೇವನ್ನು ಆಲಿದರೂ ಅವರ ಮುಖದಲ್ಲ ಅನಾದರ ಇರುತ್ತದೆ. ಆನೆಯಂತೆ ಅರೆ ಮುಚ್ಚಿದ ಕಣ್ಣಲ್ಲಿ ,ತನಗೆ ಉಪದೇಶಿಸಬೇಕಾಗಿದ್ದು ಏನು ಉಳಿದಿಲ್ಲ ಎನುವಂಥ ಭಾವ ಅವರಲ್ಲಿರುತ್ತದೆ.

**೪. ಹಣಕಾಸು ನೀತಿಯಲ್ಲಿ ವಿಶ್ವೇಶ್ವರಯ್ಯ ಅವರು ಮಾಡಿದ ಮಾರ್ಪಾಡುಗಳಾವುವು?**

ವಿಶ್ವೇಶ್ವರಯ್ಯ ಅವರು ರಾಜ್ಯದ ಆರ್ಥಿಕ ಚಟುವಟಿಕೆಗಳಿಗೆ ಭದ್ರ ಬುನಾದಿ ಹಾಕುವ ಉದ್ದೇಶದಿಂದ ಹಣಕಾಸು ನೀತಿಯಲ್ಲಿ ಮಾರ್ಪಾಡು ಮಾಡಿದರು. ಇದಕ್ಕಾಗಿ ೧೯೧೩ ರಲ್ಲಿ ಮೈಸೂರು ಬ್ಯಾಂಕನ್ನು ಸ್ಥಾಪಿಸಿದರು. ಅನಂತರ ಉಳಿತಾಯ ಬ್ಯಾಂಕ್‌ಗಳು, ಕೈಗಾರಿಕೆಗಳ ಅಭಿವೃದ್ಧಿಗೆ ಫೀಡರ್ ಬ್ಯಾಂಕ್, ಕೈಗಾರಿಕಾ ಹೂಡಿಕೆ ಮತ್ತು ಅಭಿವೃದ್ಧಿ ನಿಧಿಗಳು ರಚಿತಗೊಂಡವು. ಪ್ರಾಂತೀಯ ಸಹಕಾರಿ ಬ್ಯಾಂಕ್‌ಗಳನ್ನು ಸ್ಥಾಪಿಸಿದರು.

**೫. ಯಾವ ವ್ಯಕ್ತಿಯನ್ನು ನಾವು ಆದರ್ಶವಾಗಿ ಸ್ವೀಕರಿಸಬೇಕು?**

ನಾವು ಯಾರನ್ನು ಸದ್ಗುಣಗಳ ಸಾಕಾರ ಸ್ವರೂಪನೆಂದೂ, ಸರ್ವಥಾ ಪ್ರಮಾದಾತೀತನೆಂದೂ ಭಾವಿಸುವೆವೋ ಆ ವ್ಯಕ್ತಿಯೇ ನಮ್ಮ ಆದರ್ಶವಾಗಬೇಕು. ಆದರ್ಶ ವ್ಯಕ್ತಿಯನ್ನು ಕುರಿತು ಯೋಚಿಸುವಾಗ ದೋಷರಹಿತ ವ್ಯಕ್ತಿಯನ್ನಾರಿಸುವುದೇ ಯೋಗ್ಯ. ಅಷ್ಟೇ ಅಲ್ಲ, ನಾವು ಆದರ್ಶವೆಂದು ಭಾವಿಸುವ ಎಲ್ಲ ಗುಣಗಳೂ ಆ ವ್ಯಕ್ತಿಯಲ್ಲಿ ನಮಗೆ ಎದ್ದು ಕಾಣಬೇಕು.

**೬. ವಚನಕಾರರ ದೃಷ್ಟಿಯಲ್ಲಿ ಅರಿವು ಎಂದರೆ ಏನು? ವಿವರಿಸಿ.**

ವಚನಕಾರರ ದೃಷ್ಟಿಯಲ್ಲಿ ಅರಿವು ಅಂದರೆ ತನ್ನಷ್ಟಕ್ಕೆ ತಾನು ಇರುವ ಕೇವಲ ತಿಳುವಳಿಕೆ, ಜ್ಞಾನ ಮಾತ್ರ ಅಲ್ಲ: ಅದು ಕ್ರಿಯೆಯ ಅನುಭವದಿಂದ ಒಡಮೂಡುವುದು. ಅದು ಕೇಳಿ ತಿಳಿದಿದ್ದಲ್ಲ. ಕ್ರಿಯೆಯಲ್ಲಿ ಮೂಡಿದ ತಿಳಿವಳಿಕೆ, ಅದು ತರ್ಕವಲ್ಲ. ನಡೆಯಿಂದ ನುಡಿ ಹುಟ್ಟಿದರೆ ಅದು ಅರಿವು.

**೭. ಸ್ವಧರ್ಮವು ಯಾವುದನ್ನು ಅವಲಂಬಿಸಿದೆ?**

ಸ್ವಧರ್ಮವು ಹುಟ್ಟು, ಪರಿಸರ ಮತ್ತು ಪ್ರತಿಯೊಬ್ಬ ವ್ಯಕ್ತಿಯ ಒಳಗಿನ ನಿಶ್ಚಯವನ್ನು ಅವಲಂಬಿಸಿದೆ. ಹಿಂದೆ ಹುಟ್ಟು ಮತ್ತು ಪರಿಸರಗಳಿಂದಲೇ ಮಾನವರ ಸ್ವಧರ್ಮಗಳು ಬಲುಮಟ್ಟಿಗೆ ರೂಪಿತವಾಗುತ್ತಿದ್ದವು. ಇಂದು ತನ್ನೊಳಗಿನ ಒಲವು-ನಿಲವುಗಳಿಂದಲೇ ಸ್ವಧರ್ಮವನ್ನು ಗುರುತಿಸಿಕೊಳ್ಳುವ ಅನಿವಾರ್ಯತೆ ಇದೆ. ಇಲ್ಲಿ ಕೂಡ ಹುಟ್ಟು ಮತ್ತು ಪರಿಸರಗಳು ತಮ್ಮ ಪ್ರಭಾವವನ್ನು

ಕೆಲಮಟ್ಟಿಗೆ ಬೀರುತ್ತವೆ. ಆದರೆ ಎಂದೂ ಎಲ್ಲಿಯೂ ಇವುಗಳಿಗಿಂತ ಮುಖ್ಯವಾದುದು, ನಾವೆಲ್ಲ ನಚ್ಚಬಹುದಾದುದು ಪ್ರತಿಯೊಬ್ಬ ವ್ಯಕ್ತಿಯ ಒಳಗಿನ ನಿಶ್ಚಯವೇ ಆಗಿದೆ.

**೮. ಧರ್ಮಬುದ್ಧಿಗೆ ದುಷ್ಟಬುದ್ಧಿಯು ಯಾವ ಸಲಹೆಯಿತ್ತನು ?**

ಧರ್ಮಬುದ್ಧಿಗೆ ದುಷ್ಟಬುದ್ಧಿಯು "ಈ ಹೊನ್ನನ್ನು ಹಂಚಿಕೊಂಡು ಮನೆಯಲ್ಲ ಸ್ವೇಚ್ಛೆಯಿಂದ ಇರುವವರಲ್ಲ ಮತ್ತೆ ವ್ಯಾಪಾರಕ್ಕಾಗಿ ದೂರದೇಶಕ್ಕೆ ಹೋಗಬೇಕಾಗುತ್ತದೆ . ಆಕಾರಣದಿಂದ ನಿನಗೂ ನನಗೂ ವ್ಯಯಕ್ಕೆ(ಖರ್ಚಿಗೆ) ತಕ್ಕಷ್ಟು ಹೊನ್ನನ್ನು ತೆಗೆದುಕೊಂಡು, ಉಳಿದ ಹೊನ್ನನೆಲ್ಲವನ್ನು ಇಲ್ಲಿಯೇ ಇಡೋಣ"ಎಂದು ಸಲಹೆಯಿತ್ತನು.

**೯. ನಾಳಿನ ಕನಸನ್ನು ಬಿತ್ತಬೇಕಾದರೆ ನಾವು ಹೇಗೆ ಬದುಕಬೇಕು?**

ನಾಳಿನ ಕನಸನ್ನು ಬಿತ್ತಬೇಕಾದರೆ ಮತಪಂಥಗಳೆಲ್ಲವೂ ನಮ್ಮ ಉತ್ತಮ ಜೀವನಕ್ಕೆ ಬೆಳಕಾಗಬಲ್ಲ, ಮುಕ್ತಿಯನ್ನು ನೀಡಬಲ್ಲ, ಸನ್ಮಾನಕ್ಕೆ ಕರೆದುಕೊಂಡು ಹೋಗುವ ಮಾರ್ಗಗಳೆಂದು ತಿಳಿದು ಎಚರಿಚ ಕೆಯಲ್ಲಿ ನಾವು ಬದುಕಬೇಕು. ¨ಭಯ ಮತ್ತು ಸಂಶಯಗಳಿಂದ ಮಸುಕಾಗಿರುವಮನದ ಕಣ್ಣಿನಲ್ಲಿ ಭವಿಷ್ಯದ, ಕನಸ್ಸನ್ನು ಬಿತ್ತುತ್ತ ಬದುಕು ನಡೆಸಬೇಕು.

**೧೦.ಹೊಸಗಾಲದ ಹಸುಮಕ್ಕಳನ್ನು ಹಕ್ಕಿ ಹೇಗೆ ಹರಸಿದೆ?**

ಕಾಲವು ಯುಗಯುಗಗಳ ಹಣೆಬರೆಹವನ್ನು , ಅಳಿಸಿ ಹಾಕಿ ಹೊಸತನವನ್ನು (ಒಳ್ಳೆತನವನ್ನು) ಹೊಸ ಹಣೆಬರೆಹವನ್ನು ಬರೆದು ಎಲ್ಲರಿಗೂಬದಲಾವಣೆಯಾಗುವ ಒಳ್ಳೆಯ ಭಾಗ್ಯವನ್ನು ತೆರೆದು ಕೊಟ್ಟಿದೆ. ಹಾಗೆಯೇ ರೆಕ್ಕೆಯ ಬೀಸುತ , ಮೇಲಕ್ಕೆ ಹಾರುತ, ಹಾರುವ ಈ ಹೊಸಗಾಲದ ಹಸು ಮಕ್ಕಳಿಗೆ ಹೊಸ ಚೇತನವನ್ನು (ಶಕ್ತಿಯನ್ನು) ನೀಡುತ್ತ , ಉತ್ತಮ ¨ಭವಿಷ್ಯಕ್ಕಾಗಿ ಶುಭ ಹರಸಿದೆ.

**೧೧. ಹಲಗಲಿ ಏಕೆ ಹಾಳಾಗಿ ಹೋಯಿತು ?**

ಬ್ರಿಟೀಷರ ದಂಡು ಹಲಗಲಿಗೆ ಮುತ್ತಿಗೆ ಹಾಕಿ ಬೇಡರನ್ನು ಬಗ್ಗು ಬಡಿದು ಕೊಡಲಿ, ಕುಡಗೋಲು , ಕುಡ, ಕಬ್ಬಿಣ, ಮೊಸರು ,ಬೆಣ್ಣಿ, ಹಾಲು, ಉಪ್ಪು,ಎಣ್ಣೆ ,ಅರಿಸಿಣ, ಜೀರಗಿ , ಅಕ್ಕಿ, ಸಕ್ಕರೆ ಬೆಲ್ಲ, ಗಂಗಳ, ತಂಬಿಗೆ, ಮಂಗಳಸೂತ್ರ , ಬೀಸುವಕಲ್ಲು –ಹೀಗೆಹೀಗೆ ಸಿಕ್ಕಿದ್ದೆಲ್ಲಾ ತೆಗೆದುಕೊಂಡು, ಊರಿಗೆಕೊಳ್ಳಿ ಇಟ್ಟು ಸುಟ್ಟು ಬೂದಿ ಮಾಡಿ ಗುರುತು ಉಳಿಯದಂತೆ ಮಾಡಿ ಹೋಗಿದ್ದರಿಂದ ಹಾಳಾಗಿ ಹೋಯಿತು.

**೧೨. ಯುದ್ಧದ ವಿಚಾರದಲ್ಲಿ ಕರ್ಣನ ತೀರ್ಮಾನವೇನು ?**

ಕರ್ಣನು ಕೃಷ್ಣನನ್ನು ಕುರಿತು "ನಾಳಿನ ಕೌರವರ ಮತ್ತು ಪಾಂಡವರ ಚತುರಂಗ ಬಲದ ನಡುವಿನ ಯುದ್ಧವು ಮೃತುದೇವತೆಗೆ ಭೋಜನ ಕೂಟ ಆಗುವುದು . ನಾನು ಕೌರವನ ಉಪಕರಾದ ಋಣ ತೀರಿಸುವಂತೆ ಹೋರಾಡಿ, ಯುದ್ಧರಂಗದಲ್ಲಿ ಲೆಕ್ಕವಿಲ್ಲದಷ್ಟು ವೀರಯೋಧರನ್ನು ಕೊಂದು, ನನ್ನ ಒಡೇಯನಿಗಾಗಿ ಪ್ರಾಣವನ್ನು ಬಿಡುವೆನು .ಸೂರ್ಯನ ಮೇಲಾಣೆ ಪಾಂಡವರನ್ನ ನೋಯಿಸೆನು" ಎಂದನು .

**೧೩. ಕವಿಗೆ ಯಾವ್ಯಾವುದರಲ್ಲಿ ಆಗಸದಿಂದ ಬಿಸಿಲವರೆಗೂ ಹಸುರು ಕಾಣುತ್ತಿದೆ ?**

ಕವಿಗೆ ನವರಾತ್ರಿಯಲ್ಲಿ , ಹಸುರಿನಿಂದ ಕಂಗೊಳಿಸುವ ಭೂಮಿಯಲ್ಲಿ , ನೀಲ ಸಮುದ್ರದಲ್ಲಿ ಹಸುರಾದ ಕವಿಯ ಹೃದಯಕ್ಕೆ ಆಗಸ ಮುಗಿಲು , ಗದ್ದೆಯ ಬಯಲು , ಮಲೆ , ಕಣಿವೆ , ಸಂಜೆಯ ಬಿಸಿಲು ಕಾಡಂಚಿನ ಅಡಕೆಯ ತೋಟ , ಹೂವಿನ ಕಂಪಿನಲ್ಲಿ , ಎಲರಿನ ತಂಪಿನಲ್ಲಿ ಹಕ್ಕಿಯ ಕೊರಲಿನಲ್ಲಿ , ಹೀಗೆ ಆಗಸದಿಂದ ಬಿಸಿಲವರೆಗೂ ಕವಿಗೆ ಹಸುರು ಕಾಣುತ್ತಿದೆ .

**೧೪. ತಾನು ಹೋರಾಡುತ್ತಿರುವುದು ನೆಲಕ್ಕಲ್ಲ ಛಲಕ್ಕೆ ಎಂಬುದನ್ನು ದುರ್ಯೋಧನ ಹೇಗೆ ವಿವರಿಸುತ್ತಾನೆ ?**

ದುರ್ಯೋಧನನನನು ಭೀಷ್ಮಾಚಾರ್ಯರಿಗೆ " ನಾನು ಭೂಮಿಗಾಗಿ ಹೋರಾಡುತ್ತಿಲ್ಲ ಆದರೆ ನನ್ನ ಛಲಕ್ಕಾಗಿ ಪಾಂಡವರೊಡನೆ ಹೋರಾಡುವೆನು . ಈ ಭೂಮಿ ನನಗೆ ಪಾಳು ಭೂಮಿಗೆ ಸಮ . ನನ್ನ ಒಡ ಹುಟ್ಟಿದ ನೂರುಮಂದಿ ಸಹೋದರರು ಯುದ್ಧದಲ್ಲಿ ಹೋರಾಡಿ ಸತ್ತರು . ಸತ್ತವರೇನು ಮತ್ತೆ ಹುಟ್ಟುವುದಿಲ್ಲವೇ ? ಆದ್ದರಿಂದ ಪಾಂಡವರೊಡನೆ ಹೋರಾಡಿ ನನ್ನ ಛಲವನ್ನೇ ಮರೆಯುತ್ತೇನೆ " ಎಂದು ಹೇಳುತ್ತಾನೆ .

**೧೫. ಯಜ್ಞಾಶ್ವದ ಹಣೆಯಲ್ಲಿದ್ದ ಪಟ್ಟಿಯಲ್ಲಿ ಏನೆಂದು ಬರೆಯಲಾಗಿತ್ತು ?**

ಯಜ್ಞಾಶ್ವದ ಹಣೆಯಲ್ಲಿದ್ದ ಪಟ್ಟಿಯಲ್ಲಿ ಭೂಮಂಡಲದಲ್ಲಿ ಕೌಸಲ್ಯಯು ಮಗನಾದ ರಾಮನು ಒಬ್ಬನೇ ವೀರನು ಇದು ಅವನ ಯಜ್ಞಕುದುರೆ ಇದನ್ನು ತಡೆಯುವ ಸಾಮರ್ಥ್ಯವುಳ್ಳವರು ಯಾರೇ ಆದರು ತಡೆಯಲಿ " ಎಂದ ಬರೆಯಲಾಗಿತ್ತು .

**೧೬. ದ್ರುಪದನು ದ್ರೋಣರಿಗೆ ಹೇಳಿದ ಮಾತುಗಳು ಯಾವುವು ?**

ದ್ರುಪದನು ದ್ರೋಣರಿಗೆ " ನೀನು ಯಾರೆಂದು ನನಗೆ ತಿಳಿದಿಲ್ಲ . ನೀನು ನನ್ನನ್ನು ಅದೆಲ್ಲಿ ಕಂಡಿದ್ದೆಯೊ ? ರಾಜನಿಗೂ ಬ್ರಾಹ್ಮಣನಿಗೂ ಯಾವ ವಿಧವಾದ ಸ್ನೇಹ ? ಮನುಷ್ಯರಾದವರು ಇಷ್ಟು ನಾಚಿಕೆಗೆಟ್ಟವರೂ ಆಗುತ್ತಾರೆಯೇ ? ಎಂಬ ಮಾತುಗಳಿಂದ ದ್ರೋಣನಿಗೆ ಮರ್ಮಭೇದಕ ವಾಗುವಂತೆ ಹೀಯ್ಯಾಳಿಸಿದನು .

**೧೭. ವಿವೇಕಾನಂದರ ದೃಷ್ಟಿಯಲ್ಲಿ ದೇಶದ ಪ್ರಗತಿ ಸ್ಥಿರವಾಗುವುದು ಯಾವಾಗ ?**

ದೇಶದ ಭಾಷೆಯಲ್ಲಿ ಜನರಿಗೆ ಭಾವನೆಗಳನ್ನು ನೀಡಿದರೆ ಅವರು ವಿಷಯ ಗ್ರಹಣ ಮಾಡಿಕೊಳ್ಳಬಲ್ಲರು. ಆದರೆ ಅವರಿಗೆ ಸಂಸ್ಕೃತಿಯ ಅವಶ್ಯಕತೆ ಇದೆ. ಅವರಿಗೆ ಅದನ್ನು ಕೂಡುವ ತನಕ ಅವರ ಪ್ರಗತಿ ಸ್ಥಿರವಾಗಲಾರದು. ಸಂಸ್ಕೃತಿ ಮಾತ್ರ ಆಘಾತವನ್ನು ಸಹಿಸಬಲ್ಲದು. ಕೇವಲ ಜ್ಞಾನ ರಾಶಿಗೆ ಅದನ್ನು ಎದುರಿಸುವ ಶಕ್ತಿ ಇಲ್ಲ. ಜಗತ್ತಿನ ಜ್ಞಾನರಾಶಿಯನ್ನೆ ಕೊಡಬಹುದು. ಅದರೆ ಅದರಿಂದ ಹೆಚ್ಚು ಪ್ರಯೋಜನವಿಲ್ಲ. ಸಂಸ್ಕೃತಿಯನ್ನು ಹೊಂದಿರುವ ಜನರಿಂದ ದೇಶದ ಪ್ರಗತಿ ಸಾಧ್ಯ.

**೧೮. ಪೆರಿಯಾರ್ ಚಳವಳಿಯ ಮುಖ್ಯಾಂಶಗಳನ್ನು ಪಟ್ಟಿ ಮಾಡಿ ,**

ಪೆರಿಯಾರ್ ಚಳವಳಿಯ ಮುಖ್ಯಾಂಶಗಳು

೧. ವರ್ಣಾಶ್ರಮ ಧರ್ಮದ ಪರವಾಗಿ ಕಾಂಗ್ರೆಸ್ಸಿದೆ ಎಂದು ಅದಕ್ಕೆ ಪರ್ಯಾಯವಾದ ದ್ರಾವಿಡ ಚಳುವಳಿ ಎಂಬ ಜನಾಂಗೀಯ ಪರಿಕಲ್ಪನೆ ಕೇಂದ್ರಿತ ಚಳುವಳಿಯನ್ನು ರೂಪಸಿದರು.

೨. ತಮಿಳು ಭಾಷೆಯನ್ನು ದ್ರಾವಿಡರ ಭಾಷೆ ಎಂದರು.

೩. ಜಾತಿ ಮತ್ತು ಲಿಂಗ ತಾರತಮ್ಯಗಳನ್ನು ವಿರೋಧಿಸಿ ಸಮಾನತೆಯ ಆಶಯವನ್ನು ಎತ್ತಿ ಹಿಡಿದರು.

**೧೯. ಭಗತ್ ಸಿಂಗ್ ಮತ್ತು ಆತನ ಸಹಚರರಿಗೆ ಗಲ್ಲುಶಿಕ್ಷೆಯಾಗಲು ಕಾರಣವೇನು ?**

ಜಲಿಯನ್ ವಾಲಾಬಾಗಿನ ರಕ್ತಸಿಕ್ತವಾಗಿದ್ದ ಮಣ್ಣನ್ನು ನಿಧಿಯಂತೆ ಕಾಪಾಡಿಕೊಂಡು ಬಂದಿದ್ದ ಬಾಲಕ ಭಗತ್‌ಸಿಂಗ್ ಮುಂದೆ ತನ್ನ ಕ್ರಾಂತಿಕಾರಿ ಗುಂಪಿನ ಸಹಾಯದಿಂದ ಬ್ರಿಟಿಷ್ ಸರ್ಕಾರದ ವಿರುದ್ಧ ತನ್ನ ಸೇಡನ್ನು ತೀರಿಸಿಕೊಳ್ಳುತ್ತಾನೆ . ಇದರ ಫಲವಾಗಿ ಮರಣ ದಂಡನೆಗೆ ಈಡಾದನು .

**೨೦. ವಸಂತ ಮುಖ ತೋರಲಿಲ್ಲ ಕವನದಲ್ಲಿ ಪ್ರಕೃತಿ ಸಂಭ್ರಮ ಹೇಗೆ ವ್ಯಕ್ತವಾಗಿದೆ ?**

ಮಾವಿನ ಮರಗಳು ಮೈತುಂಬಿ ನಿಂತಿವೆ . ಹಕ್ಕಿಗಳು ರೆಕ್ಕೆ ಬಿಚ್ಚಿ ಹಾರಾಡುತ್ತಿವೆ . ಕೋಗಿಲೆಗಳು ಮನದುಂಬಿ ಇಂಪಾಗಿ ಹಾಡುತ್ತಿವೆ . ಕಡಲು ಉಕ್ಕಿ ಹರಿಯುತ್ತಿದೆ . ಮಲ್ಲಿಗೆ ಹೂವು ಮುಗುಳುನಗೆ ಬೀರಿದೆ . ಹೊಳೆಯುವ ರಂಗೋಲಿಯಲ್ಲಿ ಬಾಲರವಿ ಥಳಥಳಿಸುತ್ತಿದ್ದಾನೆ . ಈ ರೀತಿ ' ವಸಂತ ಮುಖ ತೋರಲಿಲ್ಲ ' ಕವನದಲ್ಲಿ ಪ್ರಕೃತಿಯ ಸಂಭ್ರಮ ವ್ಯಕ್ತವಾಗಿದೆ .